**All India Radio: Bangalore**
**Regional Bulletin In Kannada**
**12.11.2024 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**12.11.2024 / 2.30 p.m.**

*****************

**ಮುಖ್ಯಾಂಶಗಳು**

೧. ನಾಳೆ ಮೂರು ಕ್ಷೇತ್ರಗಳ ವಿಧಾನಸಭಾ ಉಪಚುನಾವಣೆ ಮತದಾನ; ಅಭ್ಯರ್ಥಿಗಳಿಂದ ಇಂದು ಮನೆ-ಮನೆಗೆ ತೆರಳಿ ಮತಯಾಚನೆ

೨. ಭಾರತದ ಸ್ಟಾರ್ಟ್‌ಅಪ್‌ಗಳ ಸಂಖ್ಯೆ ಒಂದು ಲಕ್ಷದ ೯೮ ಸಾವಿರಕ್ಕೆ ಏರಿಕೆ- ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ

೩. ಜೈವಿಕ ಇಂಧನ ಉತ್ಪಾದನಾ ಕ್ಷೇತ್ರದಲ್ಲಿ ಭಾರತಕ್ಕೆ ಎರಡನೇ ಸ್ಥಾನ

೪. ಚಿಕ್ಕಮಗಳೂರು ಜಿಲ್ಲೆಯಲ್ಲಿ ನಕ್ಸಲ್ ನಿಗ್ರಹ ಪಡೆ ಕಾರ್ಯಾಚರಣೆ; ಇಬ್ಬರು ಶಂಕಿತ ವ್ಯಕ್ತಿಗಳು ವಶಕ್ಕೆ

೫. ಅಕ್ರಮ ಆಸ್ತಿ ಹಿನ್ನೆಲೆ; ರಾಜ್ಯದ ವಿವಿಧೆಡೆ ಲೋಕಾಯುಕ್ತ ಅಧಿಕಾರಿಗಳಿಂದ ದಾಳಿ

*****************

ಶಿಗ್ಗಾಂವಿ, ಸಂಡೂರು, ಚನ್ನಪಟ್ಟಣ ಕ್ಷೇತ್ರದಲ್ಲಿ ನಾಳೆ ವಿಧಾನಸಭೆ ಉಪಚುನಾವಣೆಯ ಮತದಾನ ನಡೆಯಲಿದೆ. ಬೆಳಗ್ಗೆ ೭ ರಿಂದ ಸಂಜೆ ೬ರವರೆಗೆ ಮತದಾನ ನಡೆಯಲಿದೆ. ಬಹಿರಂಗ ಪ್ರಚಾರ ನಿನ್ನೆ ಅಂತ್ಯವಾದ ಹಿನ್ನೆಲೆಯಲ್ಲಿ ಅಭ್ಯರ್ಥಿಗಳು ಇಂದು ಮನೆ-ಮನೆಗೆ ತೆರಳಿ ಮತಯಾಚಿಸುತ್ತಿದ್ದಾರೆ.

ಮುಕ್ತ ಹಾಗೂ ನ್ಯಾಯಸಮ್ಮತ ಮತದಾನಕ್ಕೆ ಚುನಾವಣಾ ಆಯೋಗ ಎಲ್ಲಾ ವ್ಯವಸ್ಥೆ ಮಾಡಿದೆ. ಮತದಾನದ ಸಂದರ್ಭದಲ್ಲಿ ಯಾವುದೇ ಅಹಿತಕರ ಘಟನೆ ನಡೆಯದಂತೆ ಕಟ್ಟೆಚ್ಚರವಹಿಸಲಾಗಿದ್ದು, ಮೂರು ಕ್ಷೇತ್ರಗಳಲ್ಲೂ ಬಿಗಿ ಭದ್ರತೆ ಕಲ್ಪಿಸಲಾಗಿದೆ.

ಸೂಕ್ಷ್ಮ ಮತಗಟ್ಟೆಗಳಲ್ಲಿ ಹೆಚ್ಚಿನ ಪೊಲೀಸರನ್ನು ಬಂದೋಬಸ್ತ್‌ಗೆ ನಿಯೋಜಿಸಲಾಗಿದೆ.

ಶಿಗ್ಗಾಂವಿ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯ ಹಿನ್ನೆಲೆಯಲ್ಲಿ ಈವರೆಗೆ ೨೩೨ ಅಬಕಾರಿ ಪ್ರಕರಣಗಳನ್ನು ದಾಖಲಿಸಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ವಿಜಯಮಹಾಂತೇಶ ದಾನಮ್ಮನವರ ಮಾಹಿತಿ ನೀಡಿದ್ದಾರೆ.

ಧ್ವನಿ: ವಿಜಯಮಹಾಂತೇಶ ದಾನಮ್ಮನವರ್

ಬಳ್ಳಾರಿ ಜಿಲ್ಲೆಯ ಸಂಡೂರಿನಲ್ಲಿ ಮತದಾನಕ್ಕೆ ಅಗತ್ಯವಾದ ಸಿದ್ಧತೆ ನಡೆದಿದೆ. ಚುನಾವಣಾ ಸಿಬ್ಬಂದಿ ಮತಯಂತ್ರ ಸೇರಿದಂತೆ ಮತದಾನಕ್ಕೆ ಅವಶ್ಯವಾದ ಸಾಮಾಗ್ರಿಗಳನ್ನು ತೆಗೆದುಕೊಂಡು ಇಂದು ಮತಗಟ್ಟೆಗಳತ್ತ ತೆರಳಿದ್ದಾರೆ.

ಸಂಡೂರಿನ ಪ್ರಥಮ ದರ್ಜೆ ಕಾಲೇಜಿನಲ್ಲಿ ಮಸ್ಟರಿಂಗ್ ನಡೆದಿದ್ದು, ಮತಯಂತ್ರ, ಕಂಟ್ರೋಲ್ ಯುನಿಟ್, ವಿವಿ ಪ್ಯಾಡ್, ಶಾಹಿ, ಮತದಾರ ಪಟ್ಟಿ ಸೇರಿದಂತೆ ಇನ್ನಿತರ ಸಾಮಾಗ್ರಿಗಳನ್ನು ತೆಗೆದುಕೊಂಡು ಸಿಬ್ಬಂದಿ ತೆರಳಿದ್ದಾರೆ. ಮತದಾನ ಹಿನ್ನೆಲೆಯಲಿ ನಾಳೆ ಕ್ಷೇತ್ರದಲ್ಲಿ ಸಾರ್ವತ್ರಿಕ ರಜೆ ಘೋಷಿಸಲಾಗಿದೆ.

ಕ್ಷೇತ್ರದಲ್ಲಿ ೧ ಲಕ್ಷದ ೧೭ ಸಾವಿರದ ೭೮೯ ಪುರುಷ, ೧ ಲಕ್ಷದ ೧೮ ಸಾವಿರದ ೨೮೨ ಮಹಿಳಾ ಹಾಗೂ ೨೯ ಅಲ್ಪಸಂಖ್ಯಾತ ಲಿಂಗತ್ವ ಮತದಾರರು ಸೇರಿ ಒಟ್ಟು ೨ ಲಕ್ಷದ ೩೬ ಸಾವಿರದ ೧೦೦ ಮತದಾರರು ಇದ್ದಾರೆ.

ಮತದಾನದ ಕಾರ್ಯಕ್ಕೆ ಸಂಡೂರು ಕ್ಷೇತ್ರದಲ್ಲಿ ೧ ಸಾವಿರದ ೧೭೬ ಮಂದಿ ಅಧಿಕಾರಿ ಹಾಗೂ ಸಿಬ್ಬಂದಿ ನೇಮಕ ಮಾಡಿ ಅವರಿಗೆ ಅಗತ್ಯ ತರಬೇತಿ ನೀಡಲಾಗಿದೆ. ೬೦ ಅತಿ ಸೂಕ್ಷ್ಮ ಸೇರಿದಂತೆ ೨೫೩ ಮತಗಟ್ಟೆ ಸ್ಥಾಪಿಸಲಾಗಿದೆ. ೧೨೭ ಕಡೆ ವೆಬ್ ಕಾಸ್ಟಿಂಗ್ ನಡೆಸಲು ಆಯೋಗ ನಿರ್ಧರಿಸಿದೆ. ಚನಾವಣಾ ನೀತಿ ಸಂಹಿತೆ ಉಲ್ಲಂಘನೆ ಮಾಡಿz ಹಿನ್ನೆಲೆಯಲ್ಲಿ ಮೂರು ಪ್ರಕರಣ ದಾಖಲು ಮಾಡಲಾಗಿದೆ. ಅನಧಿಕೃತವಾಗಿ ತೆಗೆದುಕೊಂಡು ಹೋಗುತ್ತಿದ್ದ ೩೩ ಲಕ್ಷ ಹಣ ವಶಪಡಿಸಿಕೊಳ್ಳಲಾಗಿದೆ. ಸುಮಾರು ೨೦ ಪ್ರಕರಣ ದಾಖಲಾಗಿದೆ ಎಂದು ಜಿಲ್ಲಾಡಳಿತ ಸ್ಪಷ್ಟಪಡಿಸಿದೆ.

ಚನ್ನಪಟ್ಟಣದಲ್ಲೂ ನಾಳೆ ಮತದಾನಕ್ಕೆ ಆಯೋಗ ಸಕಲ ಸಿದ್ಧತೆ ನಡೆಸಿದೆ. ಚನ್ನಪಟ್ಟಣ ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ೨೭೬ ಮತಗಟ್ಟೆಗಳನ್ನು ರಚಿಸಲಾಗಿದ್ದು, ಎಲ್ಲಾ

ಮತಗಟ್ಟೆಗಳಿಗೆ ವೆಬ್‌ಕಾಸ್ಟಿಂಗ್‌ಗೆ ವ್ಯವಸ್ಥೆ ಮಾಡಿಕೊಳ್ಳಲಾಗಿದೆ. ೧೧೯ ಸೂಕ್ಷ್ಮ ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ. ೧೧೯ ಮೈಕ್ರೋ ವೀಕ್ಷಕರನ್ನು ನಿಯೋಜಿಸಲಾಗಿದೆ. ೮ ಅರೆಸೇನಾಪಡೆಗಳು ಜಿಲ್ಲೆಗೆ ಆಗಮಿಸಿದ್ದು, ಬಿಗಿ ಬಂದೋಬಸ್ತ್ ಏರ್ಪಡಿಸಲಾಗಿದೆ.

೫೪ ಕ್ಲಸ್ಟರ್ ಮತಗಟ್ಟೆಗಳಿಗೆ ಸಹಾಯಕ ಸಬ್‌ಇನ್ಸ್‌ಪೆಕ್ಟರ್‌ಗಳನ್ನು ಭದ್ರತೆಗೆ ನಿಯೋಜಿಸಲಾಗಿದೆ.

*****************

ದೇಶದಲ್ಲಿ ಒಂದು ಲಕ್ಷದ ೨೮ ಸಾವಿರ ಸ್ಟಾರ್ಟ್ ಅಪ್ ಗಳು ಕಾರ್ಯನಿರ್ವಹಿಸುತ್ತಿವೆ ಎಂದು ಕೇಂದ್ರ ಗ್ರಾಹಕ ವ್ಯವಹಾರಗಳ ಖಾತೆ ಸಚಿವ ಪ್ರಹ್ಲಾದ್ ಜೋಷಿ ತಿಳಿಸಿದ್ದಾರೆ.

ದಾವಣಗೆರೆಯಲ್ಲಿಂದು ಖಾಸಗಿ ವಿಶ್ವವಿದ್ಯಾಲಯದಲ್ಲಿ ನೂತನ ವಿದ್ಯಾರ್ಥಿ ನಿಲಯಕ್ಕೆ ಶಂಕು ಸ್ಥಾಪನೆ ನೆರವೇರಿಸಿ ಮಾತನಾಡಿದ ಅವರು, ೨೦೧೬ ರಲ್ಲಿ ದೇಶದಲ್ಲಿ ಕೇವಲ ೪೫೦ ಸ್ಟಾರ್ಟ್‌ಅಪ್ ಗಳಿದ್ದವು. ಇದೀಗ ಇವುಗಳ ಸಂಖ್ಯೆ ೧ ಲಕ್ಷದ ೨೮ ಸಾವಿರ ದಾಟಿದ್ದು, ೧ ಕೋಟಿ ೩೦ ಲಕ್ಷ ಜನರಿಗೆ ಉದ್ಯೋಗ ದೊರೆತಿದೆ ಎಂದು ಹೇಳಿದ್ದಾರೆ.

*****************

ಜೈವಿಕ ಇಂಧನ ಉತ್ಪಾದನಾ ಕ್ಷೇತ್ರದಲ್ಲಿ ಭಾರತವು ಜಾಗತಿಕವಾಗಿ ಎರಡನೇ ಸ್ಥಾನದಲ್ಲಿದೆ ಎಂದು ಕೇಂದ್ರ ಪೆಟ್ರೋಲಿಯಂ, ನೈಸರ್ಗಿಕ ಅನಿಲ ಇಲಾಖೆಯ ಸಚಿವ ಹರ್ದೀಪ್ ಸಿಂಗ್ ಪುರಿ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ೨೭ನೇ ಇಂಧನ, ತಂತ್ರಜ್ಞಾನ ಶೃಂಗಸಭೆ ಉದ್ಘಾಟಿಸಿ ಮಾತನಾಡಿದ ಅವರು, ಮುಂದಿನ ವರ್ಷದ ವೇಳೆಗೆ ಭಾರತ ನಿಗದಿತ ಸಮಯಕ್ಕಿಂತ ಮುಂಚಿತವಾಗಿ ಶೇಕಡ ೨೦ ರಷ್ಟು ಜೈವಿಕ ಇಂಧನ ಮಿಶ್ರಣದ ಗುರಿಯನ್ನು ಸಾಧಿಸುವ ಹಾದಿಯಲ್ಲಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ಭಾರತವು ಹಸಿರು ಇಂಧನ ಮಿಶ್ರಣದಿಂದ ಆಮದು ವೆಚ್ಚದಲ್ಲಿ ೯೧ ಸಾವಿರ ಕೋಟಿ ರೂಪಾಯಿಗಳನ್ನು ಉಳಿಸಬಹುದು ಎಂದು ಹೇಳಿದ್ದಾರೆ.

ಇದೇ ವೇಳೆ ಸಚಿವರು, ಪೆಟ್ರೋಲಿಯಂ ಮತ್ತು ನೈಸರ್ಗಿಕ ಸಚಿವಾಲಯದ ೨೦೨೩-೨೪ನೇ ಸಾಲಿನ ಅತ್ಯುತ್ತಮ ಇಂಧನ ಸಮರ್ಥ ತಂತ್ರಜ್ಞಾನ ಪ್ರಶಸ್ತಿಗಳನ್ನು ವಿತರಿಸಿದರು.

*****************

ಚಿಕ್ಕಮಗಳೂರು ಜಿಲ್ಲೆಯ ಕುದುರೆಮುಖ ರಾಷ್ಟ್ರೀಯ ಉದ್ಯಾನವನ ವ್ಯಾಪ್ತಿಯಲ್ಲಿ ಪೊಲೀಸ್ ಇಲಾಖೆ ಹಾಗೂ ನಕ್ಸಲ್ ನಿಗ್ರಹ ಪಡೆ ಜಂಟಿಯಾಗಿ ಕಾರ್ಯಚರಣೆ ಆರಂಭಿಸಿದೆ.

ನಕ್ಸಲ್ ಚಟುವಟಿಕೆಗೆ ಸಹಕರಿಸಿರುವ ಅನುಮಾನದ ಹಿನ್ನಲೆಯಲ್ಲಿ ಇಬ್ಬರು ಶಂಕಿತ ವ್ಯಕ್ತಿಗಳನ್ನು ನಾಡ ಬಂದೂಕು ಸಹಿತ ವಶಕ್ಕೆ ಪಡೆಯಲಾಗಿದ್ದು ವಿಚಾರಣೆ ನಡೆಯುತ್ತಿದೆ.

ಶೃಂಗೇರಿ ಮತ್ತು ಕೊಪ್ಪ ತಾಲೂಕಿನ ಅರಣ್ಯದಂಚಿನ ಗ್ರಾಮಗಳಲ್ಲಿ ಕಳೆದ ಒಂದು ವಾರದಿಂದ ನಕ್ಸಲ್ ಚಟುವಟಿಕೆಗಳ ಬಗ್ಗೆ ಅನುಮಾನ ಮೂಡಿದೆ. ಕೆಲವೆಡೆ ನಕ್ಸಲರು ಭೇಟಿ ನೀಡಿರುವ ಬಗ್ಗೆ ಮಾಹಿತಿ ಆಧರಿಸಿ ಕಾರ್ಯಾಚರಣೆ ಆರಂಭಿಸಲಾಗಿದೆ.

ಪಶ್ಚಿಮ ವಲಯ ಐ.ಜಿ.ಪಿ ಅಮಿತ್ ಸಿಂಗ್, ಚಿಕ್ಕಮಗಳೂರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿಕ್ರಂ ಅಮಾಟೆ, ನಕ್ಸಲ್ ನಿಗ್ರಹ ಪಡೆಯ ವರಿಷ್ಠಾಧಿಕಾರಿ ಜಿತೇಂದ್ರ ಕುಮಾರ್ ಶೃಂಗೇರಿಗೆ ಭೇಟಿ ನೀಡಿ ಪೊಲೀಸ್ ಅಧಿಕಾರಿಗಳ ಜೊತೆ ಸಭೆ ನಡೆಸಿದ್ದಾರೆ. ಶೃಂಗೇರಿ, ಕೊಪ್ಪ ಭಾಗದ ಕಿಗ್ಗಾ, ಕೆರೆಕಟ್ಟೆ, ಬುಕಡಿಬೈಲು, ಯಡಗುಂದ, ಶೀರ್ಲು ಗ್ರಾಮಗಳ ಸುತ್ತಮುತ್ತ ಪೊಲೀಸ್ ಸಿಬ್ಬಂದಿ ಕಾರ್ಯಾಚರಣೆ ತೀವ್ರಗೊಳಿಸಿದ್ದಾರೆ.

*****************

ಅಕ್ರಮ ಆಸ್ತಿ ಆರೋಪ ಹಿನ್ನೆಲೆಯಲ್ಲಿ ರಾಜ್ಯದ ವಿವಿಧೆಡೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದ್ದಾರೆ.

ಬೀದರ್, ಬೆಳಗಾವಿ, ಧಾರವಾಡ, ಮೈಸೂರು, ದಾವಣಗೆರೆ ಜಿಲ್ಲೆಗಳಲ್ಲಿ ದಾಳಿ ನಡೆದಿದ್ದು, ಅಧಿಕಾರಿಗಳು ದಾಖಲೆಗಳನ್ನು ವಶಪಡಿಸಿಕೊಂಡು ಪರಿಶೀಲನೆ ನಡೆಸುತ್ತಿದ್ದಾರೆ.

ಮೈಸೂರು ಮಹಾನಗರ ಪಾಲಿಕೆಯ ವಲಯ ಆಯುಕ್ತರ ನಿವಾಸದ ಮೇಲೆ ದಾಳಿ ನಡೆದಿದೆ. ಶ್ರೀರಂಗಪಟ್ಟಣದ ಈ ಹಿಂದಿನ ತಹಶೀಲ್ದಾರ್ ನಿವಾಸದ ಮೇಲೆ ದಾಳಿ ನಡೆಸಲಾಗಿದೆ. ದಾವಣಗೆರೆಯಲ್ಲಿ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಗೆ ಸೇರಿದ ಹಿರಿಯ ಅಧಿಕಾರಿ ನಿವಾಸದಲ್ಲಿ ಶೋಧಕಾರ್ಯ ನಡೆಯುತ್ತಿದೆ.

ಬೀದರ್‌ನ ಜಿಲ್ಲಾ ತರಬೇತಿ ಕೇಂದ್ರದ ಹಿರಿಯ ಅಧಿಕಾರಿ ಹಾಗೂ ಬೆಳಗಾವಿ ಜಿಲ್ಲೆಯ ನಿಪ್ಪಾಣಿ ತಾಲೂಕಿನ ಗ್ರಾಮ ಲೆಕ್ಕಾಧಿಕಾರಿ ಕಚೇರಿ ಹಾಗೂ ನಿವಾಸದ ಮೇಲೆ ದಾಳಿ ನಡೆದಿದೆ. ಈ

ಗ್ರಾಮಲೆಕ್ಕಾಧಿಕಾರಿ ಚಿಕ್ಕೋಡಿಯಿಂದ ಬಾಗಲಕೋಟೆಗೆ ೧ ಕೋಟಿ ೧೦ ಲಕ್ಷ ರೂಪಾಯಿ ಅಕ್ರಮವಾಗಿ ಸಾಗಿಸುತ್ತಿದ್ದಾಗ ಸಿಕ್ಕಿ ಬಿದ್ದಿದ್ದರು ಎಂದು ಐಎಎನ್‌ಎಸ್ ಸುದ್ದಿಸಂಸ್ಥೆ ತಿಳಿಸಿದೆ.

*****************

ಸಂಕ್ಷಿಪ್ತ ಸುದ್ದಿಗಳು

೧. ಹಿಂಗಾರು ಹಂಗಾಮಿಗಾಗಿ ನೀರಾವರಿ ಸಲಹಾ ಸಮಿತಿ-ಐಸಿಸಿ ಸಭೆ ಇದೇ ೧೬ ರಂದು ಆಲಮಟ್ಟಿಯಲ್ಲಿನ ಕೃಷ್ಣಾ ಭಾಗ್ಯ ಜಲ ನಿಗಮದ ವ್ಯವಸ್ಥಾಪಕ ನಿರ್ದೇಶಕರ ಸಭಾಂಗಣದಲ್ಲಿ ನೀರಾವರಿ ಸಲಹಾ ಸಮಿತಿ ಅಧ್ಯಕ್ಷ ಆರ್.ಬಿ.ತಿಮ್ಮಾಪುರ ಅಧ್ಯಕ್ಷತೆಯಲ್ಲಿ ನಡೆಯಲಿದೆ ಎಂದು ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ಮಾಹಿತಿ ನೀಡಿದ್ದಾರೆ.

೨. ಗದಗ ಜಿಲ್ಲೆಯ ವಿವಿಧ ಸಹಕಾರ ಸಂಘಗಳ ಸಹಯೋಗದಲ್ಲಿ ಕೃಷಿ ಪತ್ತಿನ ಸಹಕಾರ ಸಂಘದಲ್ಲಿ ಸಹಕಾರ ಸಪ್ತಾಹಕ್ಕೆ ಇದೇ ೧೪ ರಿಂದ ೨೦ ರವರೆಗೆ ಸಹಕಾರ ಸಪ್ತಾಹ ೨೦೨೪ ಜರುಗಲಿದೆ.

೩. ಚಿಕ್ಕಬಳ್ಳಾಪುರ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ಇಂದು ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲೆಯ ಅಧಿಸೂಚಿತ ಪರಿಭಾವಿತ ಅರಣ್ಯ ಪ್ರದೇಶಗಳ ಜಂಟಿ ಸರ್ವೇ ಕಾರ್ಯದ ಪ್ರಗತಿ ಕುರಿತಂತೆ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಚರ್ಚಿಸಿದರು.

*****************

ಕೇಂದ್ರ ಸರ್ಕಾರ ಕಳೆದ ಹತ್ತು ವರ್ಷಗಳಲ್ಲಿ ಹಲವಾರು ಜನಪರ ಯೋಜನೆಗಳನ್ನು ಪರಿಚಯಿಸಿದೆ ಎಂದು ಉತ್ತರ ಕನ್ನಡ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ತಿಳಿಸಿದ್ದಾರೆ. ಜನಸಾಮಾನ್ಯರು ಈ ಯೋಜನೆಗಳ ಪ್ರಯೋಜನ ಪಡೆಯಬೇಕೆಂದು ಹೇಳಿದ್ದಾರೆ.

ಕಾರವಾರದಲ್ಲಿ ಶಿವಮೊಗ್ಗದ ಕೇಂದ್ರ ಸಂವಹನ ಇಲಾಖೆ ವತಿಯಿಂದ ಆಯೋಜಿಸಲಾಗಿದ್ದ ಕೇಂದ್ರ ಸರ್ಕಾರದ ಯೋಜನೆಗಳ ಮಾಹಿತಿ ನೀಡುವ ಛಾಯಾಚಿತ್ರ ಪ್ರದರ್ಶನ ಹಾಗೂ ಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಗ್ರಾಮೀಣ ಭಾಗಗಳ ಜನರು ಸೂರ್ಯ ಘರ್ ಯೋಜನೆಯಡಿ ಸೋಲಾರ್ ಫಲಕ ಅಳವಡಿಸಿ ವಿದ್ಯುತ್ ಶಕ್ತಿ ಉಳಿತಾಯ ಮಾಡಬಹುದು ಎಂದು ಮಾಹಿತಿ ನೀಡಿದರು.

****************

ಸಿನಿಮಾ ಸೆಟ್‌ಗೆ ಮರಗಳನ್ನು ಕಡಿತ ಆರೋಪದ ಮೇಲೆ ಅರಣ್ಯ ಇಲಾಖೆ ನ್ಯಾಯಾಲಯದ ಆದೇಶದ ಪಡೆದು ಎಫ್‌ಐಆರ್ ದಾಖಲಿಸಿದೆ. ಈ ಸಂಬಂಧ ಕೆವಿನ್ ಸಂಸ್ಥೆ ಕೆನರಾ ಬ್ಯಾಂಕ್ ಜನರಲ್ ಮ್ಯಾನೇಜರ್ ಎಚ್.ಎಂ.ಟಿ ಜನರಲ್ ಮ್ಯಾನೇಜರ್ ವಿರುದ್ಧ ಎಫ್‌ಐಆರ್ ದಾಖಲಾಗಿದೆ.

ಮರಗಳ ಮಾರಣಹೋಮದ ಆರೋಪ ಕೇಳಿ ಬಂದ ಹಿನ್ನೆಲೆಯಲ್ಲಿ ಅರಣ್ಯ ಸಚಿವ ಈಶ್ವರ್ ಖಂಡ್ರೆ ಸ್ಥಳ ಪರಿಶೀಲನೆ ನಡೆಸಿ, ಆರೋಪ ಸಾಬೀತಾದ ಹಿನ್ನೆಲೆಯಲ್ಲಿ ತಪ್ಪಿತಸ್ಥರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮದ ಎಚ್ಚರಿಕೆ ನೀಡಿದ್ದಾರೆ.

****************

ಕರಾವಳಿ ಮತ್ತು ದಕ್ಷಿಣ ಒಳನಾಡಿನ ಹಲವೆಡೆ ಇಂದಿನಿಂದ ಹಗುರದಿಂದ ಸಾಧಾರಣದಿಂದ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ನೆಚ್ಚರಿಕೆ ನೀಡಿದೆ.

ನಾಳೆಯಿಂದ ಇದೇ ೧೫ ರವರೆಗೆ ದಕ್ಷಿಣ ಒಳನಾಡಿನ ಕರ್ನಾಟಕ ಮತ್ತು ಕರಾವಳಿ ಕರ್ನಾಟಕದ ಭಾಗದಲ್ಲಿ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ.

ಬೆಂಗಳೂರು ನಗರದಲ್ಲಿ ಇಂದಿನಿಂದ ಇದೇ ೧೫ರವರೆಗೆ ಹಗುರದಿಂದ ಸಾಧಾರಣ ಮಳೆಯಾಗುವ ಸಂಭವವಿದೆ.

********ಮುಕ್ತಾಯ*********